# National
# Kannada
# 20.12.2025 19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಅಸ್ಸಾಂನಲ್ಲಿ ಅಭಿವೃದ್ಧಿಯ ಹೊಸ ಅಧ್ಯಾಯ ಆರಂಭ – ಪ್ರಧಾನಿ ನರೇಂದ್ರ ಮೋದಿ
2. ವಿಕಸಿತ ಭಾರತ ಜಿ ರಾಮ್ ಜಿ ಮಸೂದೆ ಗ್ರಾಮಗಳ ಅಭಿವೃದ್ಧಿಗೆ ಪೂರಕ – ಸಚಿವ ಶಿವರಾಜ್ ಸಿಂಗ್ ಚೌಹಾಣ್
3. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದಿನಿಂದ ಎರಡು ದಿನಗಳ ಕಾಲ ತೆಲಂಗಾಣ, ಮಧ್ಯಪ್ರದೇಶಕ್ಕೆ ಭೇಟಿ
4. ಐಸಿಸಿ ಟಿ–20 ವಿಶ್ವಕಪ್ ಕ್ರಿಕೆಟ್; ಸೂರ್ಯಕುಮಾರ್ ಯಾದವ್ ನಾಯಕತ್ವದ 15 ಸದಸ್ಯರ ತಂಡ ಪ್ರಕಟ

***************

ಅಸ್ಸಾಂನ ಗುವಾಹಟಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಲೋಕಪ್ರಿಯ ಗೋಪಿನಾಥ್ ಬಡೋರ್ಲಿಯಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಸ್ಸಾಂನ ಜೀವವೈವಿಧ್ಯತೆ ಹಾಗೂ ಸಂಸ್ಕೃತಿಯನ್ನು ಬಿಂಬಿಸುವ ಬ್ಯಾಂಬೂ ಆರ್ಕಿಡ್ ಟರ್ಮಿನಲ್ ಕಟ್ಟಡವನ್ನು ಉದ್ಘಾಟಿಸಿದರು.

ಇದಕ್ಕೂ ಮುನ್ನ ಅವರು, ಟರ್ಮಿನಲ್ ನ ಮಾದರಿಯನ್ನು ವೀಕ್ಷಿಸಿದರು. 1.4 ಲಕ್ಷ ಚದರ ಮೀಟರ್ ವಿಸ್ತೀರ್ಣ ಹೊಂದಿರುವ ನೂತನ ಟರ್ಮಿನಲ್ ವಾರ್ಷಿಕ 1.3 ಕೋಟಿ ಪ್ರಯಾಣಿಕರ ನಿರ್ವಹಣಾ ಸಾಮರ್ಥ್ಯ ಹೊಂದಿದೆ.

ಇದೇ ಸಂದರ್ಭದಲ್ಲಿ ವಿಮಾನ ನಿಲ್ದಾಣದ ಹೊರಭಾಗದಲ್ಲಿ ಅಸ್ಸಾಂನ ಮೊದಲ ಮುಖ್ಯಮಂತ್ರಿ ಗೋಪಿನಾಥ್ ಬಡೋರ್ಲಿಯಾ ಅವರ 80 ಅಡಿ ಎತ್ತರದ ಪ್ರತಿಮೆಯನ್ನು ಅನಾವರಣಗೊಳಿಸಿದರು.

ನಂತರ ಸಾರ್ವಜನಿಕ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಅಸ್ಸಾಂನಲ್ಲಿ ಅಭಿವೃದ್ಧಿಯ ಹೊಸ ಅಧ್ಯಾಯ ಆರಂಭವಾಗಿದೆ. ಇದು ಅಸ್ಸಾಂಗೆ ಮಾತ್ರ ಸೀಮಿತವಲ್ಲ, ಸಂಪೂರ್ಣ ಈಶಾನ್ಯ ರಾಜ್ಯಗಳಲ್ಲಿ ಅಭಿವೃದ್ಧಿಯ ನವಯುಗ ಆರಂಭಗೊಂಡಿದೆ ಎಂದು ಹೇಳಿದರು.

ಬಿಜೆಪಿ ನೇತೃತ್ವದ ಡಬಲ್ ಇಂಜಿನ್ ಸರ್ಕಾರದಲ್ಲಿ ಬ್ರಹ್ಮಪುತ್ರ ನದಿಯಂತೆ ಅಭಿವೃದ್ಧಿ ಚಟುವಟಿಕೆಗಳು ಹರಿಯುತ್ತಿದೆ. ಕಾಂಗ್ರೆಸ್‌ನ ಕಾರ್ಯಸೂಚಿಯಲ್ಲಿ ಅಸ್ಸಾಂ ಮತ್ತು ಈಶಾನ್ಯ ರಾಜ್ಯಗಳಿಗೆ ಸ್ಥಾನ ಇರಲಿಲ್ಲ ಎಂದು ಪ್ರಧಾನಿ ಟೀಕಿಸಿದರು. ಪ್ರಧಾನಮಂತ್ರಿ ಅವರು ಎರಡು ದಿನಗಳ ಗುವಾಹಟಿ ಪ್ರವಾಸ ಕೈಗೊಂಡಿದ್ದಾರೆ.

ಇದಕ್ಕೂ ಮುನ್ನ ಇಂದು ಮಧ್ಯಾಹ್ನ ಪಶ್ಚಿಮ ಬಂಗಾಳದ ನಾಡಿಯಾ ಜಿಲ್ಲೆಯ ರಾಣಾ ಘಾಟ್‌ನಲ್ಲಿ ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಿದ್ದ ಪ್ರಧಾನಿ ನರೇಂದ್ರ ಮೋದಿ, ಹವಾಮಾನ ವೈಪರೀತ್ಯ, ದಟ್ಟ ಮಂಜು ಆವರಿಸಿದ ಕಾರಣ ಹೆಲಿಕಾಪ್ಟರ್ ಲ್ಯಾಂಡಿಂಗ್ ಸಾಧ್ಯವಾಗದೆ ಕೋಲ್ಕತಾ ವಿಮಾನ ನಿಲ್ದಾಣಕ್ಕೆ ಮರಳಿದರು.

ಆದರೆ, ಸಮಾವೇಶದಲ್ಲಿ ಅಪಾರ ಸಂಖ್ಯೆಯ ಜನರು ಪ್ರಧಾನಿಯವರ ಬರುವಿಕೆಯನ್ನು ನಿರೀಕ್ಷಿಸುತ್ತಿದ್ದ ಹಿನ್ನೆಲೆ, ದೂರವಾಣಿ ಮೂಲಕ ಪರಿವರ್ತನಾ ಸಂಕಲ್ಪ ಸಭೆಯನ್ನುದ್ದೇಶಿಸಿ ಮಾತನಾಡಿದರು.

***************

ವಿಕಸಿತ ಭಾರತ ಜಿ ರಾಮ್ ಜಿ ಮಸೂದೆ ರೈತರು ಮತ್ತು ಕಾರ್ಮಿಕರಿಗೆ ಮಾತ್ರವಲ್ಲದೆ ಪ್ರತಿಯೊಂದು ಅಂಶದಲ್ಲೂ ಗ್ರಾಮಗಳ ಅಭಿವೃದ್ಧಿಗೆ ಸಂಬಂಧಿಸಿದ್ದಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಚೌಧರಿ ಚರಣ್ ಸಿಂಗ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಮುಂದಿನ ಬಜೆಟ್‌ಗಾಗಿ ಕೃಷಿ ವಲಯದಲ್ಲಿ ಸಲಹೆಗಳನ್ನು ಸಚಿವಾಲಯ ಆಹ್ವಾನಿಸುತ್ತಿದೆ ಎಂದು ಹೇಳಿದರು.

***************

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದಿನಿಂದ ಎರಡು ದಿನಗಳ ಕಾಲ ತೆಲಂಗಾಣ ಮತ್ತು ಮಧ್ಯಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ.

ತಮ್ಮ ಭೇಟಿಯ ಮೊದಲ ದಿನವಾದ ಇಂದು, ಉಪರಾಷ್ಟ್ರಪತಿಗಳು ಹೈದರಾಬಾದ್‌ನ ರಾಮೋಜಿ ಫಿಲ್ಮ್ ಸಿಟಿಯಲ್ಲಿ ನಡೆಯಲಿರುವ ಸಾರ್ವಜನಿಕ ಸೇವಾ ಆಯೋಗಗಳ ಅಧ್ಯಕ್ಷರ ರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ನಾಳೆ, ರಾಧಾಕೃಷ್ಣನ್ ಅವರು ನಂದಿಗಮಾದಲ್ಲಿರುವ ಕನ್ಹಾ ಶಾಂತಿ ವನಂನಲ್ಲಿ ನಡೆಯಲಿರುವ ವಿಶ್ವ ಧ್ಯಾನ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ನಂತರ, ಉಪರಾಷ್ಟ್ರಪತಿಗಳು ಅಟಲ್ ಫೌಂಡೇಶನ್ ಆಯೋಜಿಸುತ್ತಿರುವ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದಲ್ಲಿ ಭಾಗವಹಿಸಲು ಮಧ್ಯಪ್ರದೇಶದ ಇಂದೋರ್‌ಗೆ ಭೇಟಿ ನೀಡಲಿದ್ದಾರೆ.

***************

ದೇಶದ ರಕ್ಷಣಾ ಸನ್ನದ್ಧತೆಯನ್ನು ಬಲಪಡಿಸುವಲ್ಲಿ ಮತ್ತು ಸಶಸ್ತ್ರ ಪಡೆಗಳ ಸುಗಮ ಕಾರ್ಯನಿರ್ವಹಣೆಯಲ್ಲಿ ಹಣಕಾಸು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತದೆ ಎಂದು ನೌಕಾಪಡೆ ಮುಖ್ಯಸ್ಥ ಆಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ತಿಳಿಸಿದ್ದಾರೆ.

ದೆಹಲಿಯಲ್ಲಿ 2024ನೇ ಬ್ಯಾಚ್‌ನ ಭಾರತೀಯ ರಕ್ಷಣಾ ಲೇಖಾ ಸೇವೆ ಪ್ರಶಿಕ್ಷಣಾರ್ಥಿಗಳೊಂದಿಗೆ ಅವರು ಸಂವಾದ ನಡೆಸಿದರು. ಬಳಿಕ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ, ರಾಷ್ಟ್ರೀಯ ಕಡಲ ಹಿತಾಸಕ್ತಿಗಳ ರಕ್ಷಣೆ ಹಾಗೂ ಉತ್ತೇಜನೆಯಲ್ಲಿ ಭಾರತೀಯ ನೌಕಾಪಡೆ ವಹಿಸುತ್ತಿರುವ ನಿರ್ಣಾಯಕ ಪಾತ್ರವನ್ನು ವಿವರಿಸಿದರು.

***************

ಭಾರತ ಅತ್ಯಂತ ಮಹತ್ವಾಕಾಂಕ್ಷೆಯ ವಿದೇಶಾಂಗ ನೀತಿಯನ್ನು ಹೊಂದಿದ್ದು, ಇದು ದೀರ್ಘಕಾಲೀನ ಪರಿಣಾಮ ಹೊಂದಿದೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ಪುಣೆಯಲ್ಲಿಂದು ಸಿಂಬಿಯೊಸಿಸ್ ಅಂತಾರಾಷ್ಟ್ರೀಯ ವಿಶ್ವವಿದ್ಯಾಲಯದ 22ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ಯುವಸಮೂಹ ಅದರಲ್ಲೂ ವಿದ್ಯಾರ್ಥಿಗಳು ವಿಕಸಿತ ಭಾರತ ಗುರಿ ಸಾಧನೆಗೆ ಪ್ರಮುಖ ಸಾರಥಿಗಳಾಗಿದ್ದಾರೆ ಎಂದು ಹೇಳಿದರು.

***************

ಭಾರತೀಯ ರೈಲ್ವೆಯಲ್ಲಿ ಕಾಯ್ದಿರಿಸದ ಬೋಗಿಗಳಲ್ಲಿ ಪ್ರಯಾಣಿಸುವ ಲಕ್ಷಾಂತರ ಮಂದಿಗೆ ರೈಲ್ವೆ ಇಲಾಖೆ ಸಿಹಿ ಸುದ್ದಿ ನೀಡಿದೆ. ಡಿಜಿಟಲ್ ರೂಪದಲ್ಲಿ ಅನ್ ರಿಸರ್ವ್ಡ್ ಟಿಕೆಟ್ ಅನ್ನು ಕಾಯ್ದಿರಿಸುವ ಪ್ರಯಾಣಿಕರು ಭೌತಿಕ ಪ್ರಿಂಟ್ ಔಟ್ ಹೊಂದುವುದು ಕಡ್ಡಾಯವಲ್ಲ ಎಂದು ಇಲಾಖೆ ಅಧಿಕೃತವಾಗಿ ಸ್ಪಷ್ಟಪಡಿಸಿದೆ.

***************

ಭಾರತದ ಸಾರಿಗೆ ಕ್ಷೇತ್ರದಲ್ಲಿ ಹೊಸ ಮನ್ವಂತರಕ್ಕೆ ನಾಂದಿ ಹಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು 'ಭಾರತ್ ಟ್ಯಾಕ್ಸಿ' ಎಂಬ ವಿನೂತನ ಸೇವೆಯನ್ನು ಗ್ರಾಹಕರಿಗಾಗಿ ಮುಕ್ತಗೊಳಿಸಿದೆ.

ಇದು ಸಹಕಾರ ಸಂಘಗಳ ಆಧಾರಿತ ಸಾರಿಗೆ ಉಪಕ್ರಮವಾಗಿದ್ದು, ಖಾಸಗಿ ಕಂಪನಿಗಳ ಪ್ರಾಬಲ್ಯವಿರುವ ಈ ವಲಯದಲ್ಲಿ ಪಾರದರ್ಶಕತೆ ಮತ್ತು ಸಮಾನತೆಯನ್ನು ತರುವ ಉದ್ದೇಶ ಹೊಂದಿದೆ.

***************

ಭಾರತೀಯ ರಿಸರ್ವ್ ಬ್ಯಾಂಕ್‌ನ 620ನೇ ಮಂಡಳಿ ಸಭೆ ಹೈದರಾಬಾದ್‌ನಲ್ಲಿ ನಡೆಯಿತು. ಈ ಸಭೆಯಲ್ಲಿ ಅಪಾಯ ಆಧಾರಿತ ವಿಮಾ ಶೇವಣಿ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ ತೀರ್ಮಾನಿಸಲಾಗಿದೆ.

ಶೀಘ್ರದಲ್ಲೇ ಈ ಕುರಿತು ಆದೇಶ ಹೊರಡಿಸಲಿದ್ದು, ಮುಂದಿನ ಹಣಕಾಸು ವರ್ಷದಿಂದ ಈ ವಿಮಾ ಯೋಜನೆ ಜಾರಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಆರ್‌ಬಿಐ ಪ್ರಕಟಣೆ ತಿಳಿಸಿದೆ.

***************

ಬಿಜೆಪಿ ರಾಷ್ಟ್ರೀಯ ಕಾರ್ಯಾಧ್ಯಕ್ಷ ನಿತಿನ್ ನಬಿನ್ ಅವರು ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ದೆಹಲಿಯಲ್ಲಿ ಭೇಟಿಯಾಗಿ ಪಕ್ಷ ಬಲವರ್ಧನೆ ಕುರಿತು ಚರ್ಚೆ ನಡೆಸಿದರು.

ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ, ಪಕ್ಷವನ್ನು ತಳಮಟ್ಟದಲ್ಲಿ ಬಲಪಡಿಸುವ ನಬಿನ್ ಅವರ ಪ್ರಯತ್ನಗಳಲ್ಲಿ ಅವರಿಗೆ ಯಶಸ್ಸು ಸಿಗಲಿ ಎಂದು ಹಾರೈಸಿದ್ದಾರೆ.

ನಿತಿನ್ ನಬಿನ್ ಅವರ ನಾಯಕತ್ವದಲ್ಲಿ ವಿಶ್ವಾಸ ವ್ಯಕ್ತಪಡಿಸಿದ ಪ್ರಧಾನಿ ನರೇಂದ್ರ ಮೋದಿ, ಅವರ ಸಾಂಸ್ಥಿಕ ಮತ್ತು ಆಡಳಿತಾತ್ಮಕ ಅನುಭವವು ಪಕ್ಷಕ್ಕೆ ಅಮೂಲ್ಯವಾದ ಆಸ್ತಿಯಾಗಿದೆ ಎಂದು ಹೇಳಿದ್ದಾರೆ.

***************

ಭಾರತದ ವಿದ್ಯುನ್ಮಾನ ರಫ್ತು ಚಟುವಟಿಕೆ ಪ್ರಸಕ್ತ ಹಣಕಾಸು ವರ್ಷದಲ್ಲಿ ಗಣನೀಯ ಪ್ರಗತಿ ಸಾಧಿಸಿದ್ದು, 8 ತಿಂಗಳಲ್ಲಿ 31 ಶತಕೋಟಿ ಡಾಲರ್ ಮೌಲ್ಯದ ವಿದ್ಯುನ್ಮಾನ ಉಪಕರಣಗಳ ರಫ್ತು ಚಟುವಟಿಕೆ ನಡೆಸಲಾಗಿದೆ ಎಂದು ಕೇಂದ್ರ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಈ ಕುರಿತು ಬರೆದಿರುವ ಲೇಖನವನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, 30 ಪ್ರಮುಖ ಉತ್ಪನ್ನಗಳಿಗೆ ಈ ವರ್ಷ ಅತಿ ಹೆಚ್ಚು ಬೇಡಿಕೆ ಬಂದಿದ್ದು, ವರ್ಷದಿಂದ ವರ್ಷಕ್ಕೆ ಈ ವಲಯದಲ್ಲಿ ಪ್ರಗತಿ ಆಗುತ್ತಿದೆ. ಉದ್ಯೋಗಾವಕಾಶಗಳು ಹೆಚ್ಚುತ್ತಿವೆ ಎಂದು ಹೇಳಿದ್ದಾರೆ.

***************

ಲಡಾಖ್‌ನಲ್ಲಿಂದು ಹೊಸ ವರ್ಷದ ಸಂಕೇತವಾದ ಲೋಸರ್ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಎಲ್ಲೆಡೆ ಭಕ್ತಿ ಮತ್ತು ಸಂತೋಷದಿಂದ ಆಚರಿಸಲಾಗುವ ಸಾಂಪ್ರದಾಯಿಕ ಹೊಸ ವರ್ಷವಾದ ಲೋಸರ್ ಹಬ್ಬ ಗ್ರಾಮೀಣ ಕೃಷಿ, ಸಮೃದ್ಧ ಫಸಲು ಹಾಗೂ ಸಂಪತ್ತಿಗಾಗಿ ಪ್ರಾರ್ಥಿಸುವ ಪ್ರಮುಖ ಆಚರಣೆಯಾಗಿದೆ.

ಲೋಸರ್‌ನ ಮುನ್ನಾದಿನದಂದು ಪ್ರಾರ್ಥನಾ ದೀಪಗಳನ್ನು ಬೆಳಗಿಸುವುದು, ಕಟ್ಟಡಗಳು, ಮನೆಗಳು, ಧಾರ್ಮಿಕ ಸ್ಥಳಗಳು, ವ್ಯಾಪಾರ ಸ್ಥಳಗಳಲ್ಲಿ ದೀಪಗಳನ್ನು ಬೆಳಗಿಸಿ, ದೇವರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಗುತ್ತದೆ. ವಿಶಿಷ್ಟ ಜಾನಪದ ನೃತ್ಯಗಳು, ಹಾಡುಗಳನ್ನು ಪ್ರಸ್ತುತಪಡಿಸಿ, ಒಂಭತ್ತು ದಿನಗಳವರೆಗೆ ಹಬ್ಬದ ಸಂಭ್ರಮ ಮುಂದುವರಿಯುತ್ತದೆ.

***************

ಸಿರಿಯಾದಲ್ಲಿ ಅಮೆರಿಕದ ಪಡೆಗಳ ಮೇಲೆ ನಡೆದ ಮಾರಕ ದಾಳಿಗೆ ಪ್ರತಿಕ್ರಿಯೆಯಾಗಿ ಅಮೆರಿಕವು ಸಿರಿಯಾದಲ್ಲಿ ಇಸ್ಲಾಮಿಕ್ ಸ್ಟೇಟ್ ಗುಂಪಿನ ವಿರುದ್ಧ ಬೃಹತ್ ದಾಳಿ ನಡೆಸಿದೆ.

ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್, ಫೈಟರ್ ಜೆಟ್ ಗಳು, ರಕ್ಷಣಾ ಹೆಲಿಕಾಪ್ಟರ್‌ಗಳು ಮತ್ತು ಫಿರಂಗಿಗಳನ್ನು ಒಳಗೊಂಡಂತೆ ಈ ದಾಳಿ ಸಂಘಟಿಸಲಾಗಿದ್ದು, ಜೋರ್ಡಾನ್‌ನ ವಿಮಾನಗಳು ಕೂಡ ಇದರಲ್ಲಿ ಭಾಗಿಯಾಗಿದ್ದವು. ಈ ದಾಳಿ ಅಲ್ಲಿನ ಮೂಲಸೌಕರ್ಯ ಮತ್ತು ಶಸ್ತ್ರಾಸ್ತ್ರ ತಾಣಗಳನ್ನು ನಿರ್ಮೂಲನೆ ಮಾಡುವ ಗುರಿ ಹೊಂದಿದೆ ಎಂದು ಪ್ರತಿಕ್ರಿಯಿಸಿದ್ದಾರೆ.

***************

ಮುಂಬರುವ ಐಸಿಸಿ ವಿಶ್ವಕಪ್ ಟಿ-20 ಕ್ರಿಕೆಟ್ ಟೂರ್ನಿಗಾಗಿ ಭಾರತೀಯ ಕ್ರಿಕೆಟ್ ಮಂಡಳಿ 15 ಸದಸ್ಯರ ತಂಡ ಪ್ರಕಟಿಸಿದೆ.

ಸೂರ್ಯಕುಮಾರ್ ಯಾದವ್ ತಂಡವನ್ನು ಮುನ್ನಡೆಸಲಿದ್ದು, ಶುಭ್‌ಮನ್ ಗಿಲ್ ಉಪನಾಯಕರಾಗಿದ್ದಾರೆ. ಸ್ಪಿನ್ನರ್ ಅಕ್ಷರ್ ಪಟೇಲ್ ಹಾಗೂ ವಿಕೆಟ್ ಕೀಪರ್ ಇಶಾನ್ ಕಿಶನ್ ತಂಡದಲ್ಲಿ ಸ್ಥಾನಪಡೆದಿದ್ದಾರೆ.

ಉಳಿದಂತೆ ಸಂಜು ಸ್ಯಾಮ್‌ಸ್ಯಾಂಗ್, ಅಭಿಷೇಕ್ ಶರ್ಮಾ, ರಿಂಕು ಸಿಂಗ್, ತಿಲಕ್ ವರ್ಮಾ, ಹಾರ್ದಿಕ್ ಪಾಂಡ್ಯಾ, ಶಿವಂ ದುಬೆ, ವಾಷಿಂಗ್ಟನ್ ಸುಂದರ್, ಕುಲ್‌ದೀಪ್ ಯಾದವ್, ವರುಣ್ ಚಕ್ರವರ್ತಿ, ಅರ್ಷ್‌ದೀಪ್ ಸಿಂಗ್, ಹರ್ಷಿತ್ ರಾಣಾ ತಂಡದಲ್ಲಿ ಸ್ಥಾನಪಡೆದಿದ್ದಾರೆ.